# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆಂಟನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:22ನೇ ಡಿಸೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೆಯ ಪಟ್ಟಿ

### 02. ವಿಶೇಷ ಸದನ ಸಮಿತಿಯ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವ

**ಶ್ರೀ ಆಯನೂರು ಮಂಜುನಾಥ್ (ಅಧ್ಯಕ್ಷರು, ವಿಶೇಷ ಸದನ ಸಮಿತಿ) ಅವರು:–**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಕಾರ್ಯಕ್ರಮಕ್ಕೆ ಬಿಡುಗಡೆಯಾದ ಹಣವನ್ನು ಅವ್ಯವಹಾರ ಮಾಡಿರುವ ಸಂಬಂಧ ಪರಿಶೀಲಿಸಿ ವರದಿ ನೀಡಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲು ಇನ್ನೂ 06 ತಿಂಗಳ ಅವಧಿಗೆ ಕಾಲಾವಕಾಶವನ್ನು ವಿಸ್ತರಿಸುವ ಪ್ರಸ್ತಾವವನ್ನು ಸದನದಲ್ಲಿ ಮಂಡಿಸುವುದು.

### 03. ವರದಿಗಳನ್ನೊಪ್ಪಿಸುವುದು

ಅ) **ಡಾ. ತಳವಾರ್ ಸಾಬಣ್ಣ (ಸದಸ್ಯರು, ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿಯ 2021–22ನೇ ಸಾಲಿನ ನಾಲ್ಕನೇ ವರದಿಯನ್ನೊಪ್ಪಿಸುವುದು.

ಆ) **ಶ್ರೀ ಎನ್. ರವಿಕುಮಾರ್ (ಸದಸ್ಯರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 2021–22ನೇ ಸಾಲಿನ ಮೂವತ್ತೇಳನೇ ವರದಿಯನ್ನೊಪ್ಪಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ರಾಜ್ಯ ಸರ್ಕಾರ ಪ್ರತಿ ವರ್ಷ ವಿವಿಧ ಸಮಾಜಗಳ ಜಯಂತಿಗಳ ಆಚರಣೆಗೆ ಒದಗಿಸುತ್ತಿರುವ ಅನುದಾನದಲ್ಲಿ ತಾರತಮ್ಯವಾಗುತ್ತಿರುವ ಕುರಿತು ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

02. **ಶ್ರೀ ದಿನೇಶ್ ಗೂಳಿಗೌಡ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಮಂಡ್ಯ ಜಿಲ್ಲೆಯಲ್ಲಿನ ಹಾಲು ಉತ್ಪಾದಕರಿಗೆ ನೀಡುತ್ತಿರುವ ಪ್ರೋತ್ಸಾಹ ಧನವನ್ನು ಆರು ತಿಂಗಳುಗಳಿಂದ ಬಿಡುಗಡೆಗೊಳಿಸದೆ ಇರುವ ಕುರಿತು ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

03. **ಶ್ರೀಯುತರುಗಳಾದ ಕೆ.ಎ.ತಿಪ್ಪೇಸ್ವಾಮಿ, ಎಸ್.ಎಲ್. ಭೋಜೇಗೌಡ, ಟಿ.ಎ. ಶರವಣ, ಡಾ. ಸೂರಜ್ ರೇವಣ್ಣ ಹಾಗೂ ಸಿ.ಎನ್.ಮಂಜೇಗೌಡ** ಅವರುಗಳು ನೆಟೆ ರೋಗ ಹಾಗೂ ಪ್ರವಾಹದಿಂದ ಬೆಳೆ ಹಾನಿಯಾಗಿರುವ ತೊಗರಿ ಬೇಳೆ ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿರುವ ಕುರಿತು ಮಾನ್ಯ ಕೃಷಿ ಸಚಿವರ ಗಮನ ಸೆಳೆಯುವುದು.

04. **ಶ್ರೀ ಎಂ.ಕೆ. ಪ್ರಾಣೇಶ್** ಅವರು ಚಿಕ್ಕಮಗಳೂರು ಜಿಲ್ಲೆಯ ಎನ್.ಆರ್.ಪುರ ಹಾಗೂ ಕೊಪ್ಪ ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಯಂತ್ರ ಹಾಳಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವ ಕುರಿತು ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

## 05. ನಿಯಮ 330ರ ಮೇರೆಗೆ

೦1. **ಶ್ರೀ ಸಲೀಂ ಅಹಮದ್** ಅವರು ಅಂಗನವಾಡಿ ಕಾರ್ಯಕರ್ತರಿಗೆ ಸಾಮಾಜಿಕ, ಆರ್ಥಿಕ ಮತ್ತು ಔದ್ಯಮಿಕ ಭದ್ರತೆ ಒದಗಿಸುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಡಿ.ಎಸ್. ಅರುಣ್** ಅವರು ಶಿವಮೊಗ್ಗ ಜಿಲ್ಲೆಯಲ್ಲಿ ಉತ್ಪಾದನೆಯಾಗುವ ಅಡಿಕೆ ಮಾರಾಟದ ಒಟ್ಟು ವಹಿವಾಟಿನ ತೆರಿಗೆ ಆದಾಯದ ಬಗ್ಗೆ ಗೊಂದಲವಿರುವ ಕುರಿತು ಪ್ರಸ್ತಾಪಿಸುವುದು.

## 06. ಅರ್ಧ ಗಂಟೆ ಕಾಲಾವಧಿ ಚರ್ಚೆ

ರಾಜ್ಯದಲ್ಲಿರುವ ಕಬ್ಬು ಬೆಳೆಗಾರರಿಗೆ ನಿಗದಿಪಡಿಸಲಾದ ಎಫ್.ಆರ್.ಪಿ ಕುರಿತು ದಿನಾಂಕ:20.12.2022ರ ಚುಕ್ಕೆ ಗುರುತಿನ **ಪ್ರಶ್ನೆ ಸಂಖ್ಯೆ:21 (166+215)**ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಕುರಿತು **ಶ್ರೀ ಪ್ರಕಾಶ್ ಕೆ.ರಾಥೋಡ್ ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು ಮತ್ತು ಶ್ರೀ ಪಿ.ಆರ್. ರಮೇಶ್** ಅವರುಗಳಿಂದ ಅರ್ಧ ಗಂಟೆ ಕಾಲಾವಧಿ ಚರ್ಚೆ.

..3..

## 07. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

| | | |
|---|---|---|
| 1. | **ಶ್ರೀಯುತರುಗಳಾದ;–** | |
| | ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಹಾಗೂ ಇತರರು. | ಕರ್ನಾಟಕ– ಮಹಾರಾಷ್ಟ್ರ ಗಡಿ ವಿವಾದವನ್ನು ಶಾಶ್ವತವಾಗಿ ಪರಿಹರಿಸುವಲ್ಲಿ ಸರ್ಕಾರವು ವಿಫಲವಾಗಿರುವ ಕುರಿತು. |
| 2. | ಕೆ.ಎ. ತಿಪ್ಪೇಸ್ವಾಮಿ, ಶರವಣ ಟಿ.ಎ., ಸಿ.ಎನ್. ಮಂಜೇಗೌಡ ಮತ್ತು ಸೂರಜ್ ರೇವಣ್ಣ ಅವರುಗಳು | ಬೆಂಗಳೂರು ಮಹಾನಗರ ಪಾಲಿಕೆವತಿಯಿಂದ ಬೆಂಗಳೂರು ವಿಧಾನ ಸಭಾ ಕ್ಷೇತ್ರದ ಮತದಾರರಲ್ಲಿ ಮತದಾನದ ಬಗ್ಗೆ ಜಾಗೃತಿ ಮತ್ತು ಅರಿವು ಮೂಡಿಸಲು ನೇಮಿಸಲಾಗಿದ್ದ "ಚಿಲುಮೆ" ಖಾಸಗಿ ಸಂಸ್ಥೆಯು ಮತದಾರರ ಮಾಹಿತಿಗಳನ್ನು ಕಲೆಹಾಕುವ ಮೂಲಕ ಅಕ್ರಮವೆಸಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**